ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 6–11–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **Regional Consultative Meeting-Southern Region on New Education Policy(NEP) Teacher Education** | **7-11-2015**<br>**Saturday**<br>**9-00 a.m.** | **National Council for Teacher Education,**<br>**Southern Regional Office,**<br>**Opp. National Law School of India, Nagarabhavi,**<br>**Bangalore** |
| 2 | <u>ಬೆಳ್ಳಿ ಸಿನಿಮಾ – ಬೆಳ್ಳಿಮಾತು:</u><br>ಬೆಳ್ಳಿ ಸಿನಿಮಾ ಪ್ರದರ್ಶನ – "ಕೊಂಚಾವರಂ "<br><u>ಬೆಳ್ಳಿಮಾತು:</u><br>ಪಿ. ಉಮೇಶ್ ನಾಯಕ್<br>"ಕೊಂಚಾವರಂ"<br>ಚಿತ್ರದ ನಿರ್ದೇಶಕರು<br><u>ಅಧ್ಯಕ್ಷತೆ:</u><br>ಎಸ್. ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು<br>ಕರ್ನಾಟಕ ಚಲನಚಿತ್ರ ಅಕಾಡೆಮಿ<br><u>ಮುಖ್ಯ ಅತಿಥಿಗಳು:</u> | 07–11–2015<br>ಶನಿವಾರ<br>ಸಂಜೆ<br>4–00 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು |

| | | | |
|---|---|---|---|
| | ಬಿ. ಹೀರಾನಾಯಕ್,<br>ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು,<br><br>ಭೋಜ್ಯಾ ನಾಯಕ್,<br><br>ವ್ಯವಸ್ಥಾಪಕ ನಿರ್ದೇಶಕರು<br>ಕರ್ನಾಟಕ ತಾಂಡ್ಯ ಅಭಿವೃದ್ಧಿ ನಿಗಮ,<br><br>ಆರ್. ಶೇಖರ್,<br>ಕೊಂಚಾವರಂ ಚಿತ್ರದ ಕಾರ್ಯಕಾರಿ ನಿರ್ಮಾಪಕರು | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗೆ ಹೆಚ್ಚಿನ ಆದ್ಯತೆ

– ಡಾ. ಜಿ. ಪರಮೇಶ್ವರ್

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ಸಂಪೂರ್ಣ ನಿರ್ಮೂಲನೆ ಮಾಡುವುದು ನನ್ನ ಆದ್ಯತೆ. ಇದಕ್ಕೆ ಪೊಲೀಸ್ ಇಲಾಖೆಯ ಸಹಕಾರ ಅಗತ್ಯ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

ನಗರದ ಪೊಲೀಸ್ ಮಹಾನಿರ್ದೇಶಕರವರ ಕಚೇರಿಯಲ್ಲಿ ಇಂದು ನಡೆದ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿದ್ದ ಸಚಿವರು ರಾಜ್ಯದಲ್ಲಿ ಶೇ 16 ರಷ್ಟು ಅಲ್ಪಸಂಖ್ಯಾತರಿದ್ದರೆ ಅದರಲ್ಲಿ ಶೇ 13 ರಷ್ಟು ಮುಸ್ಲಿಂರು, ಶೇ. 2 ರಷ್ಟು ಕ್ರಿಶ್ಚಿನರು, ಶೇ 1 ರಷ್ಟು ಸಿಖ್ ಹಾಗೂ ಜೈನರು ಇದ್ದಾರೆ. ಈವರೆಲ್ಲರೂ ಶಾಂತಿಯುತವಾಗಿ ಹಾಗೂ ನೆಮ್ಮದಿಯಾಗಿ ಜೀವನ ನಡೆಸಲು ಅವಕಾಶ ಮಾಡಿಕೊಡುವುದು ಗೃಹ ಇಲಾಖೆ ಕರ್ತವ್ಯ ಎಂದರು.

ಮಂಗಳೂರು ಹಾಗೂ ಬೆಳಗಾವಿ ವಿಭಾಗಗಳಲ್ಲಿ ಶಾಂತಿ ಕದಡುವ, ಅನಾವಶ್ಯಕವಾಗಿ ಸಮಾಜವನ್ನು ಒಡೆಯುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟುವಲ್ಲಿ ಪೊಲೀಸ್ ಇಲಾಖೆ ಪಾತ್ರ ಬಹಳ ಮುಖ್ಯವೆಂದು ಅವರು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ಹೆಚ್ಚುತ್ತಿರುವ ಮರಳು ದಂಧೆ, ಬಡ್ಡಿ ವ್ಯವಹಾರ, ಭೂ ಹಗರಣ, ಭೂ ಮಾಫಿಯಾ ಈ ರೀತಿಯ ಯಾವುದೇ ದಂಧೆಯಲ್ಲಿ ಗೃಹ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಶಾಮೀಲಾಗಿದ್ದು ಕಂಡುಬಂದರೆ ಯಾವುದೇ ರೀತಿಯ ಒತ್ತಡಕ್ಕೆ ಮಣಿಯದೇ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮವನ್ನು ಕೈಗೊಳ್ಳಲಾಗುವುದು. ಆದ್ದರಿಂದ, ಇಂತಹ ಅಕ್ರಮ ದಂಧೆಗಳಲ್ಲಿ ತೊಡಗಿರುವವರಿಂದ ದೂರ ಉಳಿಯಿರಿ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಈ ಆಧುನೀಕ ಯುಗದಲ್ಲಿ ಪೊಲೀಸರು ಯಾವುದೇ ರೀತಿಯ ಸಮಾಜಘಾತಕ ಕಾರ್ಯಚಟುವಟಿಕೆಗಳ ವಿರುದ್ಧ ಕಾರ್ಯಚರಣೆಗೆ ತೆರಳುವಾಗ ವ್ಯವಸ್ಥಿತವಾದ ಯೋಜನೆ ರೂಪಿಸಿ ಮುಂಜಾಗ್ರತಾ ವಹಿಸುವುದು ಅತ್ಯವಶ್ಯಕ ಎಂದು ಅಭಿಪ್ರಾಯಪಟ್ಟರು. ಇಲ್ಲವಾದಲ್ಲಿ ನಿಮಗೇ ತೊಂದರೆಯಾಗುವುದಲ್ಲದೇ, ಸರ್ಕಾರಕ್ಕೂ ಕೆಟ್ಟ ಹೆಸರು ಬರುತ್ತದೆ ಎಂದರು.

ರೈತರ ಧರಣಿ ಸಂದರ್ಭದಲ್ಲಿ ಪೊಲೀಸರು ಬುದ್ಧಿವಂತಿಕೆಯಿಂದ ಧರಣಿ ನಿರತ ರೈತರನ್ನು ಶಾಂತಿಯುತವಾಗಿ ಧರಣಿ ನಡೆಸುವಂತೆಮನವೊಲಿಸುವುದು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟರು.

ಬೆಂಗಳೂರಿನಲ್ಲಿ ಶೇ, 40 ರಷ್ಟು ಜನಸಂಖ್ಯೆ ಬೇರೆ ರಾಜ್ಯಗಳಿಂದ ವಲಸೆ ಬಂದು ಜೀವನ ನಡೆಸುತ್ತಿದ್ದಾರೆ. ಇವರುಗಳ ರಕ್ಷಣೆ ಮತ್ತು ಇವರ ಕಾರ್ಯಚಟುವಟಿಕೆಗಳ ಮಾಹಿತಿ ಸಂಗ್ರಹಿಸುವುದು ಬಹಳ ಮುಖ್ಯ ಎಂದರು.

ಕರ್ನಾಟಕ ಸರ್ಕಾರ ಪೊಲೀಸ್ ಇಲಾಖೆಗೆ ಈ ಬಾರಿ ಹೆಚ್ಚಿನ ಅನುದಾನವನ್ನು ಒದಗಿಸಿದೆ. ಸಮವಸ್ತ್ರ ಹೊಲಿಗೆ ವೆಚ್ಚವನ್ನು 150 ರೂ ನಿಂದ 500 ರೂ. ಗಳ ವರೆಗೆ ಹೆಚ್ಚಿಸಿದೆ. ಆಹಾರ ಭತ್ಯೆ ರೂ 60 ರಿಂದ 100 ರೂ. ಗೆ ಹೆಚ್ಚಿಸಿದೆ, ಆರೋಗ್ಯ ತಪಾಸಣೆಗೆ ವಾರ್ಷಿಕ 1000 ರೂ. ಹೆಚ್ಚಿಸಲಾಗಿದೆ ಎಂದು ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರು ತಿಳಿಸಿದರು.

ಕರ್ತವ್ಯದ ವೇಳೆ ಮೃತಪಟ್ಟ ಪೊಲೀಸ್ ಅಧಿಕಾರಿಗಳಿಗೆ ನೀಡುವ ಪರಿಹಾರದ ಮೊತ್ತವನ್ನು ರೂ 5 ಲಕ್ಷದಿಂದ 30 ಲಕ್ಷದವರಗೆ ಹೆಚ್ಚಿಸಲಾಗಿದೆ ಹಾಗೂ ವಿಮಾ ಮೊತ್ತದ ಹಣವನ್ನು 5 ಲಕ್ಷದಿಂದ 20 ಲಕ್ಷದವರೆಗೆ ಹೆಚ್ಚಿಸಿದೆ. ರಾಜ್ಯದಲ್ಲಿ ಹೊಸ 30 ಮಹಿಳಾ ಪೊಲೀಸ್ ಠಾಣೆಗಳನ್ನು ಹಾಗೂ 5 ಪೊಲೀಸ್ ತರಬೇತಿ ಶಾಲೆಯನ್ನು ತೆರೆಯಲು ಸಹ ಮಂಜೂರಾತಿ ನೀಡಲಾಗಿದೆ ಎಂದರು.

ಸಭೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಪಟ್ನಾಯಕ್, ಗೃಹ ಸಚಿವರ ಸಲಹೆಗಾರ ಕೆಂಪಯ್ಯ, ಪೊಲೀಸ್ ಇಲಾಖೆ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಪಲ್ಲವಿ:ಕೆಎನ್‌ವಿ:ಜಿಪಿಆರ್.

# ಡಿಜಿಟಲ್ ಇಂಡಿಯಾ ಧ್ಯೇಯ ಇಂದು ಕರ್ನಾಟಕದಲ್ಲಿ ಸಾಕಾರ :

ಸಚಿವ ಟಿ ಬಿ ಜಯಚಂದ್ರ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಜಾರಿಗೊಂಡಿರುವ 'ಜ್ಞಾನ ಸಂಗಮ' ಕಾರ್ಯಕ್ರಮವು ಡಿಜಿಟಲ್ ಇಂಡಿಯಾ ಧ್ಯೇಯವನ್ನು ಇಂದು ಕರ್ನಾಟಕದಲ್ಲಿ ಸಾಕಾರಗೊಳಿಸಿದೆ ಎಂದು ಉನ್ನತ ಶಿಕ್ಷಣ ಹಾಗೂ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಟಿ ಬಿ ಜಯಚಂದ್ರ ಅವರು ಹೇಳಿದರು.

ನಗರದ ಸೆಂಟ್ರಲ್ ಕಾಲೇಜಿನ ಜ್ಞಾನಜ್ಯೋತಿ ಸಭಾಂಗಣದಲ್ಲಿಂದು ಸ್ಮಾರ್ಟ್– ಕರ್ನಾಟಕ ಶಿಕ್ಷಣ ಮಾನದಂಡ (SMART –Karnataka Education Yardstick) ಅಡಿ 'ಜ್ಞಾನ ಸಂಗಮ' ವೆಬ್ ಪೋರ್ಟಲ್ ಹಾಗೂ ಕೌಶಲ್ಯ ತರಬೇತಿ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಸಚಿವರು ಉನ್ನತ ಶಿಕ್ಷಣವನ್ನು ಇಂದು ಕೈಗಾರಿಕೆ ಕ್ಷೇತ್ರದ ಬೇಡಿಕೆಗೆ ಅನುಗುಣವಾಗಿ ಬದಲಾವಣೆ ಮಾಡುವ ಅಗತ್ಯವಿದೆ ಎಂದು ಅಭಿಪ್ರಾಯ ಪಟ್ಟರು.

ನಮ್ಮಲ್ಲಿನ ಯುವ ಪ್ರತಿಭೆಗಳು ಶಿಕ್ಷಣ ಹಾಗೂ ವೃತ್ತಿಗಾಗಿ ವಿದೇಶಕ್ಕೆ ತೆರಳದಂತೆ ಮಾಡಬೇಕಾದರೆ, ಅವರಿಗೆ ಇಲ್ಲೇ ಉತ್ತಮ ಅವಕಾಶಗಳನ್ನು ರೂಪಿಸಬೇಕು ಎಂದ ಅವರು, ಶಿಕ್ಷಣ ಸಂಸ್ಥೆಗಳು ಕೇವಲ ಪದವಿಗಳನ್ನು ಸೃಷ್ಠಿ ಮಾಡುವ ಕಾರ್ಖಾನೆಗಳಾಗಬಾರದು ವಿದ್ಯೆಯೊಂದಿಗೆ ಸ್ವಾವಲಂಬಿಗಳಾಗುವ ಕೌಶಲ್ಯವನ್ನು ಹೇಳಿಕೊಡಬೇಕು ಎಂದು ಕಿವಿಮಾತು ಹೇಳಿದರು.

ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕಂಡ ಅತೀವ ಬೆಳವಣಿಗೆಯಿಂದಾಗಿ ಇಂದು ಬೆಂಗಳೂರು ವಿಶ್ವದಲ್ಲೇ ಒಂದು ಬ್ರ್ಯಾಂಡ್ ಆಗಿ ಪರಿಣಮಿಸಿದೆ. ಈ ಬ್ರ್ಯಾಂಡ್ ಇಮೇಜ್‌ನ್ನು ಕಾಪಾಡಿಕೊಳ್ಳಲು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ತಾಂತ್ರಿಕ ಸುಧಾರಣೆಗಳನ್ನು ತರಬೇಕಿದೆ. ಜ್ಞಾನ ಸಂಗಮ ಕಾರ್ಯಕ್ರಮವು ಈ ನಿಟ್ಟಿನಲ್ಲಿ ಇಡೀ ರಾಜ್ಯವನ್ನೇ ಮುನ್ನಡೆಸುವ ಧ್ಯೇಯ ಹೊಂದಿದೆ ಎಂದು ಸಚಿವರು ತಿಳಿಸಿದರು.

ವಿದೇಶಗಳಲ್ಲಿ ಭಾರತದ ಶಿಕ್ಷಣ ಹಾಗೂ ಸಂಸ್ಕೃತಿಗಳ ನಿದರ್ಶನವನ್ನು ನಾಯಕರು ನೀಡುತ್ತಿದ್ದಾರೆ. 21ನೇ ಶತಮಾನ ಭಾರತೀಯರ ಶತಮಾನವೆಂದು ಹೇಳಲಾಗುತ್ತಿದೆ. ಇಂತಹ ಬೆಳವಣಿಗೆಯನ್ನು ನಾವು ಅರಿತು ನಮ್ಮ ಮಕ್ಕಳಿಗೆ ಇನ್ನೂ ಉತ್ತಮ ಶೈಕ್ಷಣಿಕ ವೇದಿಕೆಗಳನ್ನು ರೂಪಿಸಿಕೊಡಬೇಕಿದೆ ಎಂದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಕೌಶಲ್ಯ ಅಭಿವೃದ್ಧಿ ನಿಗಮ ಹಾಗೂ ಉನ್ನತ ಶಿಕ್ಷಣ ಇಲಾಖೆ ನಡುವೆ ಉದ್ಯೋಗಾರ್ಹತೆ ಮತ್ತು ಕೌಶಲ್ಯಾಭಿವೃದ್ಧಿ ಯೋಜನೆಯ ಒಡಂಬಡಿಕೆ ವಿನಿಮಯ ಮಾಡಿಕೊಳ್ಳಲಾಯಿತು. ಅಲ್ಲದೇ, 'ಜ್ಞಾನ ಸಮನ್ವಯ' ಎಂಬ ಹೆಸರಿನಡಿ ಒಟ್ಟು 15 ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶದ ಕಾಲೇಜುಗಳ ಶೈಕ್ಷಣಿಕ ಸುಧಾರಣೆಗಾಗಿ ವಿವಿಧ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾನಿಲಯಗಳೊಂದಿಗೆ ಒಡಂಬಡಿಕೆ ವಿನಿಮಯ ಮಾಡಿಕೊಳ್ಳಲಾಯಿತು.

ಸಮಾರಂಭದಲ್ಲಿ ಉಪಸ್ಥಿತರಿದ್ದ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ಕಿಮ್ಮನೆ ರತ್ನಾಕರ ಅವರು ಕಾಲೇಜು ಶಿಕ್ಷಣ ಇಲಾಖೆಯ ವಾರ್ಷಿಕ ಚಟುವಟಿಕೆಗಳ ವಿವರದ ಪುಸ್ತಿಕೆ, ಉನ್ನತ ಶಿಕ್ಷಣ ಅಕಾಡೆಮಿಯ ವಾರ್ಷಿಕ ಚಟುವಟಿಕೆಗಳ ವಿವರದ ಪುಸ್ತಿಕೆ, ತಾಂತ್ರಿಕ ಶಿಕ್ಷಣ ಇಲಾಖೆಯ ವಾರ್ಷಿಕ ಚಟುವಟಿಕೆಗಳ ವಿವರದ ಪುಸ್ತಿಕೆ ಹಾಗೂ ವಿದೇಶಿ ವಿಧ್ಯಾರ್ಥಿಗಳಿಗಾಗಿ ಸಾಗರೋತ್ತರ ಕೇಂದ್ರದ ಕಿರುಹೊತ್ತಿಗೆಯನ್ನು ಉನ್ನತ ಶಿಕ್ಷಣ ಸಚಿವರೊಂದಿಗೆ ಬಿಡುಗಡೆ ಮಾಡಿದರು.

ಸಮಾರಂಭದಲ್ಲಿ ಉನ್ನತ ಶಿಕ್ಷಣ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಭರತ್ ಲಾಲ್ ಮೀನಾ, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಎಸ್ ವಿ ರಂಗನಾಥ್, ಕಾರ್ಯನಿರ್ವಾಹಕ ನಿರ್ದೇಶಕ ಡಾ: ಎಸ್ ಎ ಕೋರಿ, ಬೆಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ತಿಮ್ಮೇಗೌಡ ಸೇರಿದಂತೆ ವಿವಿಧ ವಿಶ್ವವಿದ್ಯಾಲಯಗಳ ಕುಲಪತಿಗಳು ಹಾಗೂ ಶಿಕ್ಷಣ ಇಲಾಖೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಪಲ್ಲವಿ

ಆರ್ಥಿಕವಾಗಿ ಅಶಕ್ತರಾದ ಜನರ ಪರ ಕಾಳಜಿ ವಹಿಸಲು ವಕೀಲರಿಗೆ ಮುಖ್ಯಮಂತ್ರಿ ಕರೆ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ವಕೀಲಿ ವೃತ್ತಿ ಬಹಳ ಪವಿತ್ರವಾದ ವೃತ್ತಿಯಾಗಿದ್ದು, ಇಂತಹ ಪವಿತ್ರ ವೃತ್ತಿಯನ್ನು ಕೈಗೊಂಡಿರುವ ವಕೀಲರು ಆರ್ಥಿಕವಾಗಿ ಅಶಕ್ತರಾದ ಜನರ ಪರ ಕಾಳಜಿ ವಹಿಸಿ ಕಾನೂನು ರೀತಿಯಲ್ಲಿ ಅವರಿಗೆ ನ್ಯಾಯ ದೊರಕಿಸಿಕೊಡುವ ಕೆಲಸವನ್ನು ಮಾಡಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಸಿಟಿ ಸಿವಿಲ್ ನ್ಯಾಯಾಲಯದ ಆವರಣದಲ್ಲಿ ವಕೀಲರ ಸಂಘ ಬೆಂಗಳೂರು ವತಿಯಿಂದ ಇಂದು ಏರ್ಪಡಿಸಲಾಗಿದ್ದ ಅಭಿನಂದನಾ ಸಮಾರಂಭದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ಬಡವರು, ಹಿಂದುಳಿದವರು, ಮಹಿಳೆಯರು, ದಲಿತರಂತಹ ವರ್ಗದ ಜನರಿಗೆ ಹಿರಿಯ

ವಕೀಲರನ್ನು ನೇಮಕ ಮಾಡಿಕೊಳ್ಳುವ ಶಕ್ತಿ ಇಲ್ಲದ ಕಾರಣ ಹಣವಂತರು ಎಷ್ಟೇ ಅಪರಾಧ ಮಾಡಿದರೂ, ಕಾನೂನು ಬಾಹಿರ ಕೆಲಸ ಮಾಡಿದ್ದರೂ ಸಹ ಹಿರಿಯ ವಕೀಲರನ್ನು ನೇಮಿಸಿಕೊಂಡು ಹಣ ವ್ಯಯಿಸಿ ಶಿಕ್ಷೆಯಿಂದ ಪಾರಾಗುತ್ತಿದ್ದಾರೆ ಎಂಬ ಭಾವನೆ ಇಂದು ಜನರಲ್ಲಿ ಮನೆಮಾಡಿದ್ದು, ಇದು ಸಮಾಜದ ಹಿತದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಅಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಈ ಹಿನ್ನಲೆಯಲ್ಲಿ ಎಲ್ಲ ವಕೀಲರು ಆರ್ಥಿಕವಾಗಿ ಅಶಕ್ತರಾದ ಜನರ ಪರ ಕಾಳಜಿ ವಹಿಸುವುದು ಅತ್ಯವಶ್ಯಕ ಎಂದರು.

ವಕೀಲರು ವೃತ್ತಿ ಪರತೆ ಬೆಳೆಸಿಕೊಂಡು ಒಳ್ಳೆಯ ವಕೀಲರಾಗಿ ಕಕ್ಷಿದಾರರಿಗೆ ನ್ಯಾಯವನ್ನು ದೊರಕಿಸಿಕೊಡುವುದು ಇತ್ತೀಚಿನ ದಿನಗಳಲ್ಲಿ ಅತ್ಯವಶ್ಯಕವಾಗಿದೆ ಎಂದರು.

ನ್ಯಾಯಾಲಯದಲ್ಲಿ ಮೊಕದ್ದಮೆಗಳು ವಿಳಂಬವಾಗದ ರೀತಿ ತ್ವರಿತ ಗತಿಯಲ್ಲಿ ಇತ್ಯರ್ಥವಾಗುವ ಹಾಗೆ ನೋಡಿಕೊಳ್ಳುವ ಜವಾಬ್ದಾರಿ ವಕೀಲರ ಮೇಲಿದ ಎಂದ ಮುಖ್ಯಮಂತ್ರಿಗಳು, ವಕೀಲರಿಗೆ ವೃತ್ತಿಪರತೆ ತರಬೇತಿ ನೀಡಲಾಗುತ್ತಿರುವ ಕೆಲಸ ಅತ್ಯುತ್ತಮ ಕೆಲಸವಾಗಿದ್ದು ಇದಕ್ಕೆ ಬೇಕಾಗುವ ಎಲ್ಲ ಸಹಕಾರವನ್ನು ಸರ್ಕಾರದ ವತಿಯಿಂದ ಒದಗಿಸಲಾಗುವುದು ಎಂದು ವಕೀಲರ ಸಂಘಕ್ಕೆ ಭರವಸೆ ನೀಡಿದರು.

ಸಿವಿಲ್ ನ್ಯಾಯಾಲಯದ ವಕೀಲರ ಭವನದ ಮೂರನೇ ಹಂತದ ಕಟ್ಟಡಕ್ಕೆ 7.5 ಕೋಟಿ ರೂ. ಅನುದಾನವನ್ನು ಮುಂದಿನ ಆಯವ್ಯಯದಲ್ಲಿ ಒದಗಿಸಲಾಗುವುದು ಎಂದ ಅವರು ವಕೀಲರ ಗ್ರಂಥಾಲಯಕ್ಕೆ 10 ಲಕ್ಷ, ನ್ಯಾಯಾಲಯದ ಪಕ್ಕದಲ್ಲಿರುವ ವಿಶ್ವವಿದ್ಯಾಲಯದ ವಿದ್ಯಾರ್ಥಿ ನಿಲಯವಿರುವ ಸ್ಥಳವನ್ನು ವಿಶ್ವವಿದ್ಯಾಲಯದ ಸಿಂಡಿಕೇಟ್ ಅನುಮೋದನೆಯೊಂದಿಗೆ ಒದಗಿಸಿಕೊಡುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.

ಕಾನೂನು ಸಚಿವರಾದ ಶ್ರೀ ಟಿ. ಬಿ. ಜಯಚಂದ್ರ ಅವರು ಮಾತನಾಡಿ ವಕೀಲರ ಸಂಘದ ಬೇಡಿಕೆಯಂತೆ ಇ–ಲೈಬ್ರರಿ ಸ್ಥಾಪಿಸಲು ಈ ಸಾಲಿನ ಆಯವ್ಯಯದಲ್ಲಿ 2 ಕೋಟಿ ರೂ. ಮಂಜೂರು ಮಾಡಿದ್ದು ಇನ್ನೊಂದು ತಿಂಗಳಲ್ಲಿ ಹಣ ಮಂಜೂರು ಆದೇಶವನ್ನು ಹೊರಡಿಸಲಾಗುವುದು ಎಂದು ಭರವಸೆ ನೀಡಿದರು.

ಕರ್ನಾಟಕ ಉಚ್ಚ ನ್ಯಾಯಾಲಯದ ಹಂಗಾಮಿ ಮುಖ್ಯ ನ್ಯಾಯಮೂರ್ತಿ ಸುಬ್ರೋ ಕಮಲ್ ಮುಖರ್ಜಿ ಅವರು ಮಾತನಾಡಿ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನುಇಂದು ಅಭಿನಂದಿಸುತ್ತಿರುವುದು ತಮಗೆ ಬಹಳ

ಸಂತಸವನ್ನುಂಟು ಮಾಡಿದೆ ಎಂದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಉಚ್ಚ ನ್ಯಾಯಾಲಯಕ್ಕೆ ಎಂದಿಗೂ ಸಹಕಾರಿಯಾಗಿದ್ದಾರೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನ್ಯಾಯಮೂರ್ತಿಗಳಾದ ಎನ್. ಕುಮಾರ್, ರತ್ನಕಲಾ ಮತ್ತು ವಕೀಲರ ಸಂಘದ ಅಧ್ಯಕ್ಷ ಶಿವರಾಂ ಅವರು ಉಪಸ್ಥಿತರಿದ್ದರು.

ಪಲ್ಲವಿ/ಮಮತ/ಕೆಎಂ

## ವಿವಿಧ ಕೋರ್ಸ್‌ಗಳಲ್ಲಿ ಉಚಿತ ತರಬೇತಿ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ನಿರುದ್ಯೋಗಿಗಳಿಗೆ National Institute of Fashion Technology ಬೆಂಗಳೂರು ಇಲ್ಲಿ ಫ್ಯಾಶನ್ ಟೆಕ್ನಾಲಜಿಯ Garments Manufacturing Technology, Apparel Qualitiy Control ಮತ್ತು Garment Construction ಕೋರ್ಸ್‌ಗಳಲ್ಲಿ ಉಚಿತ ತರಬೇತಿಯನ್ನು ತರಬೇತಿ ಭತ್ಯೆಯೊಂದಿಗೆ ನೀಡಲಾಗುವುದು. ಇಚ್ಛೆಯುಳ್ಳ ಹಿಂದುಳಿದ ವರ್ಗಗಳ ಪ್ರವರ್ಗ –I, II (ಎ) III (ಎ) ಹಾಗೂ III (ಬಿ) ಗಳಿಗೆ ಸೇರಿದ ನಿರುದ್ಯೋಗಿ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಅಯಾ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆದು, ಭರ್ತಿಮಾಡಿದ ಅರ್ಜಿಯನ್ನು ದಿನಾಂಕ: 20.11.2015 ರೊಳಗಾಗಿ ಅದೇ ಕಚೇರಿಗೆ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.in ಗೆ ಭೇಟಿ ನೀಡುವುದು.

ಪಲ್ಲವಿ:ಬಾಬು:ಜಿಪಿಆರ್.

## ಹೈನುಗಾರಿಕೆ ಹಾಗೂ ಮೇವು ಉತ್ಪಾದನಾ ತರಬೇತಿ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ಹೆಸರಘಟ್ಟದಲ್ಲಿರುವ ರಾಜ್ಯ ಜಾನುವಾರು ಸಂವರ್ಧನಾ ಮತ್ತು ತರಬೇತಿ ಕೇಂದ್ರ (ಇಂಡೀ–ಡ್ಯಾನಿಷ್ ಫಾರಂ) ವು ನವೆಂಬರ್ 16 ರಿಂದ 21 ರವರೆಗೆ ಬೆಳಿಗ್ಗೆ 10.00 ರಿಂದ ಸಂಜೆ 4–00 ಗಂಟೆಗೆವರೆಗೆ ಆರು ದಿನಗಳ " ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ " ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಿದೆ.

ಆಸಕ್ತಿಯುಳ್ಳ ರೈತರು, ರೈತ ಮಕ್ಕಳು ಹಾಗೂ ರೈತ ಮಹಿಳೆಯರು ಈ ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ. ಈ ತರಬೇತಿ ಅವಧಿಯಲ್ಲಿ ವಿದ್ಯಾರ್ಥಿ ನಿಲಯದಲ್ಲಿ ಉಳಿದುಕೊಳ್ಳಲು ಇಚ್ಛಿಸುವ

ಅಭ್ಯರ್ಥಿಗಳೂ ದಿನವೊಂದಕ್ಕೆ ರೂ 25/- ರಂತೆ ವಸತಿ ಶುಲ್ಕ ಪಾವತಿಸಬೇಕಾಗಿರುತ್ತದೆ. ತರಬೇತಿ ಅವಧಿಯಲ್ಲಿ ಊಟ ಮತ್ತು ಪ್ರಯಾಣದ ವೆಚ್ಚವನ್ನು ಅಭ್ಯರ್ಥಿಗಳೇ ಭರಿಸತಕ್ಕದ್ದು.

ತರಬೇತಿಯಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ವಾಸಸ್ಥಳದ ಯಾವುದಾದರೊಂದು ದೃಢೀಕರಣ ಪತ್ರದ ಪ್ರತಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ನವೆಂಬರ್ 16 ರಂದು ಬೆಳಿಗ್ಗೆ 9-00 ಗಂಟೆಗೆ ನೇರವಾಗಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಉಪ ನಿರ್ದೇಶಕರು (ತರಬೇತಿ) ಇವರನ್ನು ನೇರವಾಗಿ ಅಥವಾ ಕಚೇರಿ ದೂರವಾಣಿ ಸಂಖ್ಯೆ: 080-28466397 ರ ಮೂಲಕ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್.

# ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಅಗತ್ಯಕ್ರಮ ಕೈಗೊಳ್ಳಲಾಗಿದೆ

**- ಶರಣಪ್ರಕಾಶ್ ಪಾಟೀಲ್**

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಹೆಚ್ಚುತ್ತಿರುವ ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಭೇಟಿಮಾಡಿದ ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಅವರು ಡೆಂಗ್ಯೂ ಜ್ವರದಿಂದ ಬಳಲುತ್ತಿರುವ ರೋಗಿಗಳಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಆದ್ಯತೆ ಮೇಲೆ ಚಿಕಿತ್ಸೆ ನೀಡಲು ಈಗಾಗಲೇ ಸೂಚನೆ ನೀಡಲಾಗಿದ್ದು ಡೆಂಗ್ಯೂ ಜ್ವರ ಪರೀಕ್ಷೆ ಮಾಡಲು ಅಗತ್ಯ ಸೌಲಭ್ಯಗಳು ಆಸ್ಪತ್ರೆಗಳಲ್ಲಿ ಇವೆ ಎಂದರು.

ಸೊಳ್ಳೆಗಳ ನಿಯಂತ್ರಣ ಹಾಗೂ ಸುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದರಿಂದ ಡೆಂಗ್ಯೂ ಜ್ವರವನ್ನು ನಿಯಂತ್ರಣಕ್ಕೆ ತರಬಹುದು. ಈ ನಿಟ್ಟಿನಲ್ಲಿ ಗ್ರಾಮ ಮಟ್ಟದಿಂದ ಹಿಡಿದು ನಗರ ಪ್ರದೇಶಗಳಲ್ಲಿ ವಾಸಮಾಡುವ ಜನರಲ್ಲಿ ಈ ಬಗ್ಗೆ ಜನ ಜಾಗೃತಿ ಮೂಲಕ ಅರಿವು ಮೂಡಿಸುವಂತಹ ಕೆಲಸ ಮಾಡಲಾಗುವುದು ಎಂದ ಶರಣಪ್ರಕಾಶ್ ಪಾಟೀಲ್ ಅವರು ಕೆಲವು ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳಿಂದ ಹೆಚ್ಚಿನ ಹಣ ಪಡೆಯುತ್ತಾರೆ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಚಿವರು ಈ ಬಗ್ಗೆ ಅರೋಗ್ಯ ಸಚಿವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಖಾಸಗಿ ಆಸ್ಪತ್ರೆಗಳಲ್ಲಿ (ಆಸ್ಪತ್ರೆಗಳಲ್ಲಿ) ಸಿಗುವ ಸೌಲಭ್ಯಗಳನ್ನು ಆಧರಿಸಿ ದರಪಟ್ಟಿ ಕಡ್ಡಾಯಗೊಳಿಸಿ ಈಗಾಗಲೇ ಆದೇಶ ಹೊರಡಿಸಲಾಗಿದೆ ಎಂದ ಸಚಿವರು ಹೆಚ್ಚು ಹಣ ಪಡೆಯುವ ಆಸ್ಪತ್ರೆಗಳಿಗೆ ಆ ವ್ಯಾಪ್ತಿಯ ಜಿಲ್ಲಾ ಆರೋಗ್ಯಾಧಿಕಾರಿಗಳು ಭೇಟಿನೀಡಿ ಪರಿಶೀಲಿಸಿ ಕ್ರಮ ಕೈಗೊಳ್ಳಲು ಕಾನೂನಿನಲ್ಲಿ ಅವಕಾಶವಿದೆ ಎಂದರು.

ನಗರದಲ್ಲಿರುವ ಕಿದ್ವಾಯಿ ಆಸ್ಪತ್ರೆಯನ್ನು ಇನ್ನೂ 6 ತಿಂಗಳಲ್ಲಿ ಮೇಲ್ದರ್ಜೆಗೇರಿಸಿ ಅಲ್ಲಿ ರೋಗಿಗಳಿಗೆ ಎಲ್ಲಾ ರೀತಿಯ ಸೌಲಭ್ಯಗಳು ಸಿಗುವಂತೆ ಮಾಡಲಾಗುತ್ತಿದೆ ಎಂದ ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಅವರು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಡಿಸೆಂಬರ್ ಒಂದರಿಂದ ಟ್ರಾಮಾ ಸೆಂಟರ್ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಪಲ್ಲವಿ:ಕೆಪಿಪಿ:ಜಿಪಿಆರ್.

## <u>ವೃತ್ತಿ ಪರೀಕ್ಷೆ ಫಲಿತಾಂಶ</u>

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಕುಶಲಕರ್ಮಿ ತರಬೇತಿ ಯೋಜನೆಯಡಿಯಲ್ಲಿ ಜುಲೈ –2015 (Conventional pattern) ರಲ್ಲಿ ರಾಜ್ಯದ 34 ಪರೀಕ್ಷಾ ಕೇಂದ್ರಗಳಲ್ಲಿ ನಡೆದ ಅಖಿಲ ಭಾರತ ವೃತ್ತಿ ಪರೀಕ್ಷೆ (ಕುತಯೋ) ಯ ಫಲಿತಾಂಶವನ್ನು ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಲ್ಲಿ, ವಿಭಾಗೀಯ ಕಛೇರಿಗಳಲ್ಲಿ ನವೆಂಬರ್ 9 ರಂದು ಬೆಳಿಗ್ಗೆ 11–00 ಗಂಟೆಗೆ ಪ್ರಕಟಿಸಲಾಗುವುದು. ಅಂಕಪಟ್ಟಿಗಳನ್ನು ಪಡೆಯಲು ದಿನಾಂಕ: 01–12–2015 ರ ನಂತರ ಆಯಾ ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರನ್ನು ಸಂಪರ್ಕಿಸಬಹುದು. ನವೆಂಬರ್ 7 ರಿಂದ ಫಲಿತಾಂಶವು www.emptrg.kar.nic.in ವೆಬ್‌ಸೈಟ್‌ನಲ್ಲೂ ಸಹ ಲಭ್ಯವಿರಲಿದೆ ಎಂದು ಪ್ರಕಟಣೆ ತಿಳಿಸಿದೆ.

ಪಲ್ಲವಿ/ಬಾಬು/ಕೆಎಂ

## Trade Test Results

**The results of the all India Trade Test under CTS (Conventional pattern) held during July-2015 will be announced in the Trade test Centre, Divisional Offices on 9-11-2015 at 11.00 A.M. The concerned Traine may contact the principals to collect the marks cards after 01-12-2015. The results are also available online at www.emptrg.kar.nic.in from 7-11-2015.**

**pallavi/babu/km/**

**Photo Caption:**

HON'BLE MINISTER FOR ENERGY, D K SHIVAKUMAR TO DAY PARTICIPATED IN THE CONFERENCE OF POWER, RENEWABLE ENERGY AND MINES MINISTERS OF STATES AND UNION TERRITORIES BEING HELD AT COCHIN [ KERALA].

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:08–11–2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀ ಪ್ರವೀಣ್ ಕುಮಾರ್ ಎ. ಮತ್ತು ತಂಡ, ಬೆಂಗಳೂರುರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ ರಾಜು ವಿ. ಮತ್ತು ತಂಡ, ರಾಮನಗರರವರಿಂದ ಜಾನಪದ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ **Cut Fruits, Dry Fruits** ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

**I.** ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಹಯೋಗದೊಂದಿಗೆ ಪದ್ಮಾಲಯ ಡ್ಯಾನ್ಸ್ ಪೌಂಡೇಶನ್‌ರವರಿಂದ "ಸಮರ್ಪಣ" ಎಂಬ ಶೀರ್ಷಿಕೆಯಡಿ ಗುರು ಶ್ರೀಮತಿ ಪದ್ಮಮುರಳಿ ಶಿಷ್ಯ ವೃಂದದವರಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಶಿವಪ್ರಿಯ ಸ್ಕೂಲ್ ಆಫ್ ಡ್ಯಾನ್ಸ್, ಬೆಂಗಳೂರುರವರ ವತಿಯಿಂದ ನೃತ್ಯ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ ಡಾ. ಬ್ಯಾಡರಹಳ್ಳಿ ಶಿವರಾಜ್, ಕವಿಗಳು ಹಾಗೂ ಕನ್ನಡ ಉಪನ್ಯಾಸಕರು, ಆಕ್ಸ್‌ಫರ್ಡ್, ಬೆಂಗಳೂರು ಇವರಿಂದ "ಪು.ತಿ. ನರಸಿಂಹಾಚಾರ್ ಅವರ ಸಾಹಿತ್ಯ – ಒಂದು ಚಿಂತನೆ" ಬಗ್ಗೆ ಉಪನ್ಯಾಸ ಕಾರ್ಯಕ್ರಮವನ್ನು ಮತ್ತು ಚಂದ್ರಿಕ ಮಹಾಪತ್ತರ್ ಹಾಗೂ ಅಂಕಿತ ಸಾಹೋ ಅವರಿಂದ ಒಡಿಸ್ಸಿ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.** ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 6.00 ಗಂಟೆಯಿಂದ ಮದ್ಯಾಹ್ನ 12.00 ಗಂಟೆಯವರೆಗೆ ಫಾಲೂನ್ ದಾಫಾ ಸ್ವಯಂ ಸೇವಕರ ವತಿಯಿಂದ "ಫಾಲೂನ್ ದಾಫಾ" ಮನಸ್ಸು ಮತ್ತು ಶರೀರದ ಒಂದು ಸಾಧನೆಯ ಅಭ್ಯಾಸದ ಅರಿವನ್ನು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಕನ್ನಡ ಕ್ರಿಯಾ ಸಮಿತಿ ಬೆಂಗಳೂರುರವರ ವತಿಯಿಂದ "ಉದ್ಯಾನವನದಲ್ಲಿ ಸಾಹಿತ್ಯ ಸೌರಭ" ಎಂಬ ಕಾರ್ಯಕ್ರಮದಡಿ ಕ್ವಿಜ್ ಮುಖಾಂತರ ಸಾರ್ವಜನಿಕರಿಗೆ ಉಚಿತ ಕನ್ನಡ ಪುಸ್ತಕಗಳ ವಿತರಣೆಯನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ವಿದ್ಯಾರಣ್ಯ ಸ್ವಯಂ ಸೇವಾ ಸಂಸ್ಥೆ, ಮಂಡೂರುರವರು ನಡೆಸಿಕೊಡುತ್ತಿರುವ ವೃದ್ಧಾಶ್ರಮ, ವಿಕಲಚೇತನ ಮಕ್ಕಳ ಶಾಲೆ ಹಾಗೂ ಸ್ವಧಾರ ಮಹಿಳಾ ಪುನಶ್ಚೇತನ ಕೇಂದ್ರ ಇವುಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪಲ್ಲವಿ/ಬಾಬು/ಕೆಎಂ